# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1239 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.03.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ, ಎಷ್ಟು ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ; | ಹೌದು.<br><br>ದಿನಾಂಕ:15.03.2024 ರಂದು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-1) ಹುದ್ದೆಗಳ ನೇಮಕಾತಿಗೆ ಹಾಗೂ ದಿನಾಂಕ: 01.03.2024 ರಂದು ಹಾಗೂ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-2) ಹುದ್ದೆಗಳ ನೇರ ನೇಮಕಾತಿ ಮಾಡುವ ಸಲುವಾಗಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. |
| (ಆ) | ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಹೊರತುಪಡಿಸಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆಯಲಾಗಿದೆ; (ವಿವರ ನೀಡುವುದು) | ನೇರ ನೇಮಕಾತಿ ಕೋಟಾದಡಿಯಲ್ಲಿ ಖಾಲಿ ಇದ್ದ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತಿರುತ್ತದೆ. ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳನ್ನು ಒಳಗೊಂಡಂತೆ 247 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಈ ನೇಮಕಾತಿ ಪ್ರಕ್ರಿಯೆಯನ್ನು ಹೊರತುಪಡಿಸಿ ನೇರ ನೇಮಕಾತಿ ಕೋಟಾದಡಿ ಇನ್ನೂ ಖಾಲಿ ಇರುವ 204 ಹುದ್ದೆಗಳ ನೇರ ನೇಮಕಾತಿಗೆ ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಕ್ರಮ ವಹಿಸಲಾಗುತ್ತಿದೆ. |
| (ಇ) | ಯಾವ ಕಾಲಮಿತಿಯಲ್ಲಿ ಉಳಿದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು? (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2025, ದಿನಾಂಕ:27-02-2026 ರಲ್ಲಿನ ಮಾರ್ಗಸೂಚಿಗಳಂತೆ, ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗುವುದು.<br><br>ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-1) ವೃಂದದ ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಗ್ರಾಅಪ 245 ಗ್ರಾಪಂಅ 2026

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.